ಈ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಗದುಗಿನಲ್ಲಿ ಹೊಸ ಪ್ರಾದೇಶಿಕ ಕಾರ್ಯಾಗಾರ ಮತ್ತು ಆಧುನಿಕ ಬಸ್ ನಿಲ್ದಾಣವನ್ನು ನಿರ್ಮಿಸಲು ಸೂಕ್ತವಾದ 15 ಎಕರೆ ನಿವೇಶನವನ್ನು ಒದಗಿಸಲು ನಗರ ಸಭೆಯವರನ್ನು ಕೋರಲಾಗಿದೆ.

ವಿಷಯ:- ಭೂತನಾಳ ಕೆರೆಯ ಸುತ್ತಮುತ್ತಲಿನ ಪ್ರದೇಶಗಳ ಅತಿಕ್ರಮಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 238 (49)

ಶ್ರೀ ಬಿ.ಆರ್.ಪಾಟೀಲ್ (ಗದಗ್):- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ವಿಜಾಪುರ ನಗರಕ್ಕೆ ನೀರು ಪೂರೈಸುವ ಭೂತನಾಳ ಕೆರೆಯ ಸುತ್ತಮುತ್ತಲಿನ ರೈತರಿಂದ ಅಕ್ರಮಿಸಲ್ಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು? (ಅತಿಕ್ರಮಿಸಿದವರ ಹೆಸರುಗಳನ್ನು ನೀಡುವುದು)

ಇ) ಕೆರೆಯ ಸುತ್ತಮುತ್ತ ಕೊಳವೆ ಬಾವಿಗಳನ್ನು ಹಾಕಿ ತಮ್ಮ ಹೊಲಗಳಿಗೆ ನೀರಾವರಿ ಮಾಡಿಕೊಂಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ? ಬಂದಿದ್ದರೆ ಸದರಿ ಕೊಳವೆ ಬಾವಿಗಳ ಮಾಲೀಕರ ಹೆಸರುಗಳನ್ನು ನೀಡುವುದು.

ಈ) ಇದನ್ನು ತಡೆಗಟ್ಟಲು ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು?

ಶ್ರೀ ರಮೇಶ್ ಸಿ.ಜಿಗಜಿಣಗಿ (ಕಂದಾಯ ಸಚಿವರು):-

ಅ) ಭೂತನಾಳ ಕೆರೆಯ ಸುತ್ತಮುತ್ತಲಿನ ಪ್ರದೇಶದ ಯಾವುದೇ ರೈತರಿಂದ ಅತಿಕ್ರಮಣವಾಗಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ವಿಷಯ:- ಮೈಸೂರಿನಲ್ಲಿರುವ ಅಂಧರ ಕೈಗಾರಿಕಾ ತರಬೇತಿ ಕೇಂದ್ರದ ಸಿಬ್ಬಂದಿ ಸೇವಾ ಭದ್ರತೆ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 240 (770)

ಶ್ರೀಮತಿ ಪ್ರಮೀಳಾ ನೇಸರ್ಗಿ (ಚಾಮರಾಜಪೇಟೆ):- ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಮೈಸೂರಿನ ಅಂಧರ ಕೈಗಾರಿಕಾ ತರಬೇತಿ ಕೇಂದ್ರಕ್ಕೆ ನೇಮಕಗೊಂಡಿರುವ